# ಕರ್ನಾಟಕ ಸರ್ಕಾರ

ಸಂಖ್ಯೆ: **MWD 371 MDS 2016**

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು,ದಿನಾಂಕ:04-10-2016

## ಸುತ್ತೋಲೆ

**ವಿಷಯ: ವಕ್ಫ್ ಸಂಸ್ಥೆಗಳು ತಮ್ಮ ವಾರ್ಷಿಕ ಆದಾಯದಲ್ಲಿ ಶೇ.7ರಷ್ಟನ್ನು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ನೀಡುವ ಬಗ್ಗೆ.**

* * * * *

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧೀನದಲ್ಲಿ ಬರುವ ವಕ್ಫ್ ಸಂಸ್ಥೆಗಳು ಶಾದಿಮಹಲ್/ಸಮುದಾಯಭವನಗಳನ್ನು ಕಟ್ಟಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಾಗ ವಕ್ಫ್ ಕಾಯ್ದೆಯ ನಿಯಮ-72 ರಂತೆ ವಕ್ಫ್ ಸಂಸ್ಥೆಗಳ ವಾರ್ಷಿಕ ಆದಾಯದಲ್ಲಿ ಶೇ.7ರಷ್ಟು ಆದಾಯವನ್ನು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ಪಾವತಿಸಿ, ಪಾವತಿ ರಶೀದಿಯನ್ನು ಪ್ರಸ್ತಾವನೆಯೊಂದಿಗೆ ಸಲ್ಲಿಸತಕ್ಕದ್ದು. ಪಾವತಿ ರಶೀದಿ ಇಲ್ಲದ ಪ್ರಸ್ತಾವನೆಗಳನ್ನು ಪರಿಗಣಿಸಬಾರದೆಂದು ಸೂಚಿಸಿದೆ.

ಈಗಾಗಲೇ ಸರ್ಕಾರದಿಂದ ಅನುದಾನ ಪಡೆದಿರುವ ವಕ್ಫ್ ಸಂಸ್ಥೆಗಳು ಸಹ ಶೇ.7%ರಷ್ಟು ಅನುದಾನವನ್ನು ರಾಜ್ಯ ವಕ್ಫ್ ಮಂಡಳಿಗೆ ಸಲ್ಲಿಸತಕ್ಕದೆಂದು ಸೂಕ್ತ ನಿರ್ದೇಶನ ನೀಡತಕ್ಕದ್ದು. ಅನುದಾನ ಪಾವತಿಸಬೇಕಾದ ವಕ್ಫ್ ಸಂಸ್ಥೆಗಳಿಂದಲೂ ಸಹ ಮೇಲ್ಕಂಡ ಆದಾಯದ ಭಾಗವನ್ನು ಸ್ವೀಕರಿಸಿದ ನಂತರ ಅನುದಾನ ಬಿಡುಗಡೆ ಮಾಡತಕ್ಕದ್ದು. ಅನುದಾನವನ್ನು ಬಿಡುಗಡೆ ಮಾಡುವ ಮೊದಲು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಿಂದ ನಿರಾಕ್ಷೇಪಣಾ ಪತ್ರವನ್ನು ಜಿಲ್ಲಾ ವಕ್ಫ್ ಅಧಿಕಾರಿಯಿಂದ ಪಡೆಯತಕ್ಕದ್ದು.

.....2

RANJITHAMADAM/SUTTOLE

ಈ ಸೂಚನೆಯನ್ನು ಚಾಚು ತಪ್ಪದೇ ಪಾಲಿಸತಕ್ಕದೆಂದು ಈ ಮೂಲಕ ಸೂಚಿಸಲಾಗಿದೆ.

(ಅಕ್ರಂ ಭಾಷ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.

**ಗೆ:**

1. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಬೆಂಗಳೂರು.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು.
3. ಎಲ್ಲಾ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ)
4. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಕನಾಟಕ ರಾಜ್ಯ ವಕ್ಫ್ ಮಂಡಳಿ, (ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮುಖಾಂತರ)

RANJITHAMADAM/SUTTOLE